(51)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ.ರವರು ನಿಯಮ 330 ರ ಅಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಯ ಈ ಕೆಳಕಂಡ ಪ್ರಶ್ನೆಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಉತ್ತರ.**

ಪ್ರಶ್ನೆ: **ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಈ ವರ್ಷ ಅಕಾಲಿಕ ಮತ್ತು ವಾಡಿಕೆಗಿಂತ ಅತೀ ಹೆಚ್ಚು ಮಳೆ ಸುರಿದ ಕಾರಣದಿಂದ ಸಾಕಷ್ಟು ಅಡಿಕೆ ಮರಗಳು ನಾಶವಾಗಿದ್ದು, ಅಡಿಕೆ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅಡಿಕೆ ಮರ ನಾಶವಾಗಿರುವ ರೈತರಿಗೆ ಮರು ನಾಟಿ ಮಾಡಲು ಕೇರಳ ಮಾದರಿಯಲ್ಲಿ ಸಹಾಯ ಧನ ನೀಡಬೇಕು ಎಂಬ ಬೇಡಿಕೆ ಜಿಲ್ಲೆಯಾದ್ಯಂತ ಸತತವಾಗಿ ಮತ್ತು ಅತ್ಯಂತ ತೀವ್ರವಾಗಿ ಕೇಳಿಬರುತ್ತಿದೆ.**

**ಬಹುವಾರ್ಷಿಕವಾಗಿ ಫಸಲು ನೀಡುವ ಅಡಿಕೆ ಮರಗಳು ನಾಶವಾಗಿರುವ ಕಾರಣದಿಂದ ಬೆಳೆಗಾರರು ಆರ್ಥಿಕವಾಗಿ ಅತ್ಯಂತ ಸಂಕಷ್ಟದ ಪರಿಸ್ಥಿತಿಗೆ ಸಿಲುಕಿದ್ದು, ಹಾಳಾಗಿರುವ ಅಡಿಕೆ ತೋಟಗಳ ಪುನಃಶ್ಚೇತನಕ್ಕೆ ಸರ್ಕಾರ ಇದುವರೆಗೆ ಯಾವುದೇ ಅಗತ್ಯ ಕ್ರಮವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.**

****

**ಉತ್ತರ:-**ರಾಜ್ಯದಲ್ಲಿ ಅಡಿಕೆ ಬೆಳೆಯನ್ನು 6.92 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದ್ದು, ಇದರ ಉತ್ಪಾದನೆ ಅಂದಾಜು 10.19 ಲಕ್ಷ ಮೆ.ಟನ್ ಗಳಾಗಿರುತ್ತದೆ. ಅಡಿಕೆ ಬೆಳೆಯನ್ನು ಪ್ರಮುಖವಾಗಿ ಶಿವಮೊಗ್ಗ, ದಕ್ಷಿಣ ಕನ್ನಡ, ತುಮಕೂರು, ಹಾಸನ, ಚಿಕ್ಕಮಗಳೂರು, ದಾವಣಗೆರೆ, ಚಿತ್ರದುರ್ಗ, ಉತ್ತರಕನ್ನಡ ಹಾಗೂ ಕೊಡಗು ಜಿಲ್ಲೆಗಳಲ್ಲಿ ಬೆಳೆಯಲಾಗುತ್ತಿದೆ. ಹವಾಮಾನ ವೈಪರೀತ್ಯದಿಂದಾಗಿ ವಾತಾವರಣದಲ್ಲಿ ಕಡಿಮೆ ಉಷ್ಣಾಂಶ (20 ರಿಂದ 25 ಡಿಗ್ರಿ ಸೆಂಟಿ ಗ್ರೇಡ್‌ಗಿಂತ ಕಡಿಮೆ), ಅಧಿಕ ತೇವಾಂಶ ಶೇ 90% ಕಿಂತ ಅಧಿಕವಾಗಿದ್ದರಿಂದ ಹಾಗೂ ಮಳೆಯ ಏರುಪೇರುನಿಂದಾಗಿ ಮೋಡ ಕವಿದ ವಾತಾವರಣದಿಂದ ಅಡಿಕೆ ಬೆಳೆಯು ಹಾನಿಗೊಳಗಾಗಿದೆ.

**ಅಡಿಕೆ ಬೆಳೆಯ ರೋಗ ನಿಯಂತ್ರಿಸಲು ತೋಟಗಾರಿಕೆ ಇಲಾಖೆಯಿಂದ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ:**

1. ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯಡಿ ಅಡಿಕೆ ಬೆಳೆ ಸೇರಿದಂತೆ ತೋಟಗಾರಿಕೆ ಬೆಳೆಗಳ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ರೂ.5000/- ಪ್ರತಿ ಹೆಕ್ಟೇರ್ ಘಟಕ ವೆಚ್ಚದಡಿ ಸಸ್ಯ ಸಂರಕ್ಷಣಾ ಔಷಧಿಗಳ ಖರೀದಿಗೆ ರೈತರಿಗೆ ಶೇ.30ರಂತೆ ಪ್ರತಿ ಹೆಕ್ಟೇರ್‌ಗೆ ರೂ.1,500 ಗಳಂತೆ 2 ಹೆಕ್ಟೇರ್ ವರೆಗೆ ರೂ.3,000 ಗಳ ಸಹಾಯಧನ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ರೂ.15.00 ಲಕ್ಷಗಳು ನಿಗಧಿಯಾಗಿದ್ದು, ಈವರೆಗೂ ರೂ. 9.24 ಲಕ್ಷಗಳ ಸಹಾಯಧನವನ್ನು 485 ಫಲಾನುಭವಿಗಳಿಗೆ ಪಾವತಿಸಲಾಗಿರುತ್ತದೆ.
2. 2025-26 ನೇ ಸಾಲಿನಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯ "Special Interventions" ಕಾರ್ಯಕ್ರಮದಡಿ ಅಡಿಕೆ ಬೆಳೆಯಲ್ಲಿ ಎಲೆಚುಕ್ಕೆ ರೋಗದ ನಿಯಂತ್ರಣ ಕಾರ್ಯಕ್ರಮಕ್ಕೆ ಒಟ್ಟು ರೂ.860.65 ಲಕ್ಷಗಳ ಅನುದಾನ ನಿಗದಿಯಾಗಿದೆ. ಸದರಿ ಅನುದಾನದಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ಒಟ್ಟು ರೂ. 60.60 ಲಕ್ಷಗಳ ಅನುದಾನ ನಿಗದಿಯಾಗಿದ್ದು ಹಾಗೂ ಕಾರ್ಯಕ್ರಮವು ಪ್ರಗತಿಯಲ್ಲಿರುತ್ತದೆ. ಈವರೆಗೆ 1520 ರೈತರಿಗೆ ರೂ. 23.67 ಲಕ್ಷಗಳ ಸಹಾಯಧನ ನೀಡಲಾಗಿರುತ್ತದೆ.
3. ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಯಡಿ ಜಿಲ್ಲೆಗಳಿಗೆ ಅಡಿಕೆ ಬೆಳೆಯು ಅಧಿಸೂಚಿತವಾಗಿದ್ದು, ಹವಾಮಾನ ವೈಪರೀತ್ಯದಿಂದ ಬೆಳೆ ನಷ್ಟ ಸಂಭವಿಸಿದಲ್ಲಿ ಸದರಿ

ಯೋಜನೆಯಡಿ ವಿಮಾ ಪರಿಹಾರವನ್ನು ಒದಗಿಸಲಾಗುತ್ತಿದೆ. ಅಡಿಕೆ ಬೆಳೆ ವಿಮೆ ವಿವರ ಈ ಕೆಳಕಂಡಂತಿವೆ.

| ಕ್ರ. ಸಂ. | **2024-2025 ನೇ ಸಾಲಿನ ಬೆಳೆ ವಿಮೆ ವಿವರ** | **ದಕ್ಷಿಣ ಕನ್ನಡ ಜಿಲ್ಲೆ** |
|---|---|---|
| 1. | ಅರ್ಜಿಗಳ ಸ್ವೀಕೃತ (ಸಂಖ್ಯೆ) | 242550 |
| 2. | ವಿಸ್ತೀರ್ಣ (Covered) ಹೆಕ್ಟೇರ್ ಗಳಲ್ಲಿ | 55637 |
| 3. | ವಿಮಾ ಮೊತ್ತ (Sum insured) (Amount in Lakhs) | 71216.58 |
| 4. | ಪಾವತಿಸಲಾದ ವಿಮಾ ಮೊತ್ತ (Claim amount in Lakhs) | 14185.53 |
| 5. | ಫಲಾನುಭವಿಗಳ ಸಂಖ್ಯೆ | 139423 |
| 6. | 2025-2026 ನೇ ಸಾಲಿನ ಬೆಳೆ ವಿಮೆ ಅರ್ಜಿಗಳ ಸ್ವೀಕೃತ (ಸಂಖ್ಯೆ) | 296068 |
| 7. | ವಿಮಾ ಮೊತ್ತ (Sum insured) (Amount in Lakhs) | 84074.68 |

4. ಅಡಿಕೆ ಬೆಳೆಯ ಕೊಳೆರೋಗದ ಲಕ್ಷಣ ಹಾಗೂ ನಿರ್ವಹಣೆ ಕ್ರಮಗಳ ಕುರಿತು ಇಲಾಖಾ ಅಧಿಕಾರಿಗಳ ವತಿಯಿಂದ ರೈತರ ತಾಕುಗಳಿಗೆ ಭೇಟಿ ನೀಡಿ ನಿರ್ವಹಣೆ ಕ್ರಮಗಳ ಕುರಿತು 8 ತರಬೇತಿ ಹಾಗೂ ಪ್ರಾತ್ಯಕ್ಷತೆ ಕಾರ್ಯಕ್ರಮಗಳನ್ನು ಕೈಗೊಂಡು 760 ರೈತರಿಗೆ ಮಾಹಿತಿ ನೀಡಲಾಗಿರುತ್ತದೆ.
5. 2023-24ನೇ ಸಾಲಿನಲ್ಲಿ ಅಡಿಕೆ ಎಲೆ ಚುಕ್ಕೆ ರೋಗದ ಸಂಶೋಧನೆಗಾಗಿ ರೂ.43.61/- ಲಕ್ಷಗಳ ಅನುದಾನವನ್ನು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಶಿವಮೊಗ್ಗ ರವರಿಗೆ ಒದಗಿಸಲಾಗಿದ್ದು, ಸಂಶೋಧನೆ ಹಾಗೂ ರೈತರ ತಾಕುಗಳಲ್ಲಿ ಹೊಸ ತಂತ್ರಜ್ಞಾನಗಳನ್ನು ಅಳವಡಿಸಲು ಶಿವಮೊಗ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗಳಲ್ಲಿ 8 ಪ್ರಾತ್ಯಕ್ಷತೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ರೋಗದ ನಿರ್ವಹಣೆಗಾಗಿ ಸಮಗ್ರ ರೋಗ ನಿರ್ವಹಣಾ ಅಧ್ಯಯನದ ಪ್ರಕಾರ ಉತ್ತಮ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರ ಜೊತೆಗೆ ಸಮುದಾಯ ಮಟ್ಟದಲ್ಲಿ ಶಿಲೀಂಧ್ರ ನಾಶಕಗಳ ಸಕಾಲಿಕ ಸಿಂಪರಣೆ, ಶಿಲೀಂಧ್ರದ ಸೋಂಕು, ರೋಗದ ಉಲ್ಬಣ ಮತ್ತು ಹರಡುವಿಕೆಯನ್ನು ಕಡಿಮೆ ಮಾಡಲು ಸಹಾಯಕವಾಗುತ್ತದೆ. ಈ ಕುರಿತು ಈಗಾಗಲೇ ಅರಿವು ಮೂಡಿಸಲು ಅಗತ್ಯ ಕಾರ್ಯಕ್ರಮ ಕೈಗೊಳ್ಳಲಾಗುತ್ತಿದೆ.
6. ಸದರಿ ರೋಗ ಬಾಧೆಗೆ ನಿರ್ಧಿಷ್ಟವಾದ ಕಾರಣಗಳನ್ನು ಕಂಡು ಹಿಡಿಯಲು ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಗೆ ರೂ.50.00 ಲಕ್ಷಗಳ ಅನುದಾನವನ್ನು ಪ್ರಯೋಗಾಲಯದ ಉನ್ನತೀಕರಣಕ್ಕಾಗಿ ಒದಗಿಸಲಾಗಿದೆ. ಇದರಿಂದ ರೋಗವನ್ನು ತುರ್ತಾಗಿ ಕಂಡು ಹಿಡಿಯಲು ಸಹಕಾರಿಯಾಗುತ್ತಿದೆ.
7. ಪ್ರಸಕ್ತ ಸಾಲಿಗೆ ಅಡಿಕೆ ಬೆಳೆಗೆ ರೋಗಗಳು ಹಾಗೂ ಪೋಷಕಾಂಶಗಳ ಸಮಗ್ರ ನಿರ್ವಹಣೆಗೆ ಒಟ್ಟಾರೆ ರೂ.57776.33 ಲಕ್ಷಗಳ ಪ್ರಸ್ತಾವನೆಯನ್ನು ಸಿದ್ಧಪಡಿಸಿದ್ದು ಇದರಲ್ಲಿ MIDH ಮಾರ್ಗಸೂಚಿಯನ್ವಯ ಶೇ.30 ರಷ್ಟು ಸಹಾಯಧನದಂತೆ ಒಟ್ಟು ರೂ.17332.90 ಲಕ್ಷಗಳ ಬೇಡಿಕೆಯ ಪ್ರಸ್ತಾವನೆಯನ್ನು (ಕೇಂದ್ರ ಪಾಲು ರೂ.10399.74 ಲಕ್ಷಗಳು ಹಾಗೂ ರಾಜ್ಯ ಪಾಲು ರೂ.6933.14 ಲಕ್ಷಗಳು) ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.
8. ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರ ಸಮೂಹ ಮಾಧ್ಯಮಗಳ ಮೂಲಕ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ

ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ.

9. ಹಿಂದಿನ ಸಾಲಿನಲ್ಲಿ ಬೆಳೆ ಹಾನಿಯಾಗಿರುವ ಅಂದಾಜು 79,123.67 ಹೆಕ್ಟೇರ್ ಪ್ರದೇಶಕ್ಕೆ ಪ್ರತಿ ಹೆಕ್ಟೇರ್ ಗೆ NDRF/SDRF ಮಾರ್ಗಸೂಚಿಯನ್ವಯ ರೂ.22,500/-ಗಳಂತೆ ಅಡಿಕೆ ಕೊಳೆ ರೋಗ ಬಾಧಿತ ರೈತರಿಗೆ ಪರಿಹಾರ ಒದಗಿಸಲು ಕೇಂದ್ರ ಸರ್ಕಾರಕ್ಕೆ ರೂ.178.03 ಕೋಟಿಗಳ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಗೆ ರೂ.1.87 ಕೋಟಿಗಳು ನಿಗಧಿಯಾಗಿದೆ.
10. 30.62 ಹೆಕ್ಟೇರ್ ಹಾನಿಯಾದ ತೋಟಗಾರಿಕೆ ಬೆಳೆಗಳಿಗೆ ಪ್ರತಿ ರೈತರಿಗೆ 2.00 ಹೆಕ್ಟೇರ್‌ಗೆ ಮಿತಿಗೊಳಿಸಿ ಬಹುವಾರ್ಷಿಕ ಬೆಳೆಗಳಿಗೆ ಕೇಂದ್ರ ಸರ್ಕಾರದ NDRF/SDRF ಮಾರ್ಗಸೂಚಿಯನ್ವಯ ರೂ. 22500 ಪ್ರತಿ ಹೆಕ್ಟೇರ್ ಗೆ ಮತ್ತು ರಾಜ್ಯ ಸರ್ಕಾರದಿಂದ ಹೆಚ್ಚಿಸಿರುವ Input subsidy ಪ್ರತಿ ಹೆಕ್ಟೇರ್ ಗೆ ರೂ. 8500 ಎಲ್ಲಾ ಸೇರಿ ಒಟ್ಟು ಪ್ರತಿ ಹೆಕ್ಟೇರ್ ಗೆ ರೂ. 31000 ಪರಿಹಾರವನ್ನು ಕಂದಾಯ ಇಲಾಖೆಯ ಪರಿಹಾರ ತಂತ್ರಾಂಶದ ಮೂಲಕ ವಿತರಿಸಲಾಗುತ್ತದೆ. ಇಲ್ಲಿಯವರೆಗೂ ಕೃಷಿ ಹಾಗೂ ತೋಟಗಾರಿಕೆ ಬೆಳೆಹಾನಿಯಾದ ಒಟ್ಟು 244 ರೈತರಿಗೆ ರೂ. 16.63 ಲಕ್ಷಗಳನ್ನು ಕಂದಾಯ ಇಲಾಖೆಯ ಪರಿಹಾರ ತಂತ್ರಾಂಶದ ಮೂಲಕ ವಿತರಿಸಲಾಗಿದೆ.
11. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ (MGNREGA) ಅಡಿಯಲ್ಲಿ ಅಡಿಕೆ ತೋಟಗಳನ್ನು ನಿರ್ಮಾಣ ಮಾಡಲು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಫಲಾನುಭವಿಗಳಿಗೆ ಕೂಲಿ ಹಾಗೂ ಸಾಮಗ್ರಿ ವೆಚ್ಚಸೇರಿ ಪ್ರತಿ ಹೆಕ್ಟೇರ್ ಗೆ ರೂ. 1.96 ಲಕ್ಷಗಳ ವರೆಗೆ ನೆರವು ನೀಡಲಾಗುತ್ತಿದೆ. ಈವರೆಗೂ 230.66 ಹೆಕ್ಟೇರ್‌ಗಳಿಗೆ ರೂ. 646.99 ಲಕ್ಷಗಳ ಸಹಾಯಧನವನ್ನು ನೀಡಲಾಗಿದೆ.

ಕೇರಳ ರಾಜ್ಯದ ಕಾಸರಗೋಡು ಜಿಲ್ಲೆಯಲ್ಲಿ ಮಾತ್ರ 2022-23 ನೇ ಸಾಲಿನಲ್ಲಿ ರೈತರಿಗೆ ನಾಶವಾಗಿರುವ ಅಡಿಕೆ ಮರವನ್ನು ತೆಗೆಯಲು ಪ್ರತಿ ಮರಕ್ಕೆ ರೂ. 200 ರಂತೆ ಹಾಗೂ ಹೊಸದಾಗಿ ಮರು ನಾಟಿ ಮಾಡಲು ಗಿಡಕ್ಕೆ ರೂ. 20 ರಂತೆ ಸಹಾಯಧನವನ್ನು ನೀಡಲಾಗಿರುತ್ತದೆ. ಪ್ರಸ್ತುತ ಈ ಕಾರ್ಯಕ್ರಮವು ಅನುಷ್ಠಾನದಲ್ಲಿರುವುದಿಲ್ಲ. ಅಡಿಕೆ ಮರ ನಾಶವಾಗಿರುವ ರೈತರಿಗೆ ಪುನಃಶ್ಚೇತನಕ್ಕೆ ಕೇರಳ ಮಾದರಿಯಲ್ಲಿ ಸಹಾಯಧನ ನೀಡುವ ಪ್ರಸ್ತಾವನೆ ಪರಿಶೀಲನೆಯಲ್ಲಿರುವುದಿಲ್ಲ.

**ಸಂಖ್ಯೆ: HORTI 573 HGM 2025**

**(ಎಸ್. ಎಸ್. ಮಲ್ಲಿಕಾರ್ಜುನ್)**
**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**